## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕರ್ನಾಟಕ ಪಂಚಾಯತ್ ರಾಜ್ ಇಂಜಿನಿಯರಿಂಗ್ ಸೇವೆಗಳು ( ವೃಂದ ಮತ್ತು ನೇಮಕಾತಿ) ನಿಯಮಗಳಿಗೆ ಸಂಬಂಧಿಸಿದಂತೆ ಕಾರ್ಯಕಾರಿ ಆದೇಶ.

**ಓದಲಾಗಿದೆ:-**

1. ಸರ್ಕಾರದ ಅಧಿಸೂಚನೆ ಸಂಖ್ಯೆ. ಆರ್‌ಡಿಪಿ 139 ಸೇಶಿಕಾ 91, ದಿನಾಂಕ. 24-05-2008.
2. ಸರ್ಕಾರದ ಸುತ್ತೋಲೆ ಸಂಖ್ಯೆ. ಸಿ ಆಸುಇ 140 ಸೇನಿಇ 2010, ದಿನಾಂಕ. 07-04-2011

*****

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಅಧಿಸೂಚನೆ ಮೂಲಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕರ್ನಾಟಕ ಪಂಚಾಯತ್ ರಾಜ್ ಇಂಜಿನಿಯರಿಂಗ್ ಸೇವೆಗಳು (ವೃಂದ ಮತ್ತು ನೇಮಕಾತಿ) ನಿಯಮಗಳನ್ನು ಜಾರಿಗೆ ತರಲಾಗಿದ್ದು, ಈ ನಿಯಮಗಳು ದಿನಾಂಕ. 24-05-2008 ರಿಂದ ಜಾರಿಗೆ ಬಂದಿರುತ್ತದೆ. ಸದರಿ ನಿಯಮದ ಷೆಡ್ಯೂಲ್-Iರ ಕ್ರಮ ಸಂಖ್ಯೆ.3 ರಲ್ಲಿನ ಕಾರ್ಯಪಾಲಕ ಇಂಜಿನಿಯರ್ ವೃಂದ ಬಲವನ್ನು 45ಕ್ಕೆ ನಿಗದಿಪಡಿಸಿದೆ. ಈ ಹುದ್ದೆಗಳಲ್ಲಿ ಉಪ ನಿರ್ದೇಶಕರು, ಹೆಚ್.ಆರ್.ಡಿ. ಸೆಲ್ ಸೇರಿದೆ. ಒಟ್ಟು 45 ಹುದ್ದೆಗಳು ಕಾರ್ಯಪಾಲಕ ಇಂಜಿನಿಯರ್ ವೃಂದದ ಹುದ್ದೆಗಳಾಗಿರುತ್ತವೆ. ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಉಪ ನಿರ್ದೇಶಕರು, ಮಾನವ ಸಂಪನ್ಮೂಲ ಅಭಿವೃದ್ಧಿ ಕೋಶ ಹುದ್ದೆಯನ್ನು ನಿರ್ದಿಷ್ಟವಾಗಿ ಗೊತ್ತುಪಡಿಸದೇ ಇರುವುದರಿಂದ ಸದರಿ ಹುದ್ದೆಯನ್ನು ಮುಂದೆ ಯಾವುದೇ ಉದ್ದೇಶಕ್ಕೆ ಪರಿಗಣನೆಗೆ ತೆಗೆದುಕೊಳ್ಳದ ಪರಿಸ್ಥಿತಿ ಉಂಟಾಗಿದೆ.

ಆದ್ದರಿಂದ, ಸರ್ಕಾರವು ಈ ನಿಟ್ಟಿನಲ್ಲಿ ಅಮೂಲಾಗ್ರವಾಗಿ ಪರಿಶೀಲಿಸಿ ಕರ್ನಾಟಕ ಪಂಚಾಯತ್ ರಾಜ್ ಇಂಜಿನಿಯರಿಂಗ್ ಸೇವೆಗಳು (ವೃಂದ ಮತ್ತು ನೇಮಕಾತಿ) ನಿಯಮಗಳು 2008ರ ಷೆಡ್ಯೂಲ್-I ರಲ್ಲಿ ಉಪ ನಿರ್ದೇಶಕರು, ಹೆಚ್.ಆರ್.ಡಿ. ಸೆಲ್ / ಕಾರ್ಯಪಾಲಕ ಇಂಜಿನಿಯರ್ ಎಂದು ಮತ್ತು ಷೆಡ್ಯೂಲ್-IIರ ಕಲಂ -3ರ ಜೊತೆಗೆ By posting of Executive Engineer ಎಂದು ಸೇರ್ಪಡೆ ಮಾಡಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

## ಆದೇಶ ಸಂಖ್ಯೆ. ಗ್ರಾಅಪ 275 ಸೇಶಿಕಾ 2010, ಬೆಂಗಳೂರು, ದಿನಾಂಕ.21-08-2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಕರ್ನಾಟಕ ಪಂಚಾಯತ್ ರಾಜ್ ಇಂಜಿನಿಯರಿಂಗ್ ಸೇವೆಗಳು (ವೃಂದ ಮತ್ತು ನೇಮಕಾತಿ) ನಿಯಮಗಳು 2008ರಲ್ಲಿ ಕಾರ್ಯಪಾಲಕ ಇಂಜಿನಿಯರ್ ವೃಂದ ಬಲವನ್ನು 45ಕ್ಕೆ ನಿಗದಿಪಡಿಸಲಾಗಿದ್ದು, ಈ 45 ಹುದ್ದೆಗಳಲ್ಲಿ ಉಪ ನಿರ್ದೇಶಕರು, ಹೆಚ್.ಆರ್.ಡಿ. ಸೆಲ್ ಹುದ್ದೆ ಸೇರಿದ್ದು, ಷೆಡ್ಯೂಲ್-IIರ

----2

ಕಲಂ -3ರ ಜೊತೆಗೆ 3 (a) By posting of Executive Engineer ಎಂದು ಸೇರ್ಪಡೆ ಮಾಡಿದೆ.

ಈ ಆದೇಶವನ್ನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ ರವರ ಟಿಪ್ಪಣಿ ಸಂಖ್ಯೆ. ಸಂವ್ಯಶಾಇ 182 ಅಶಾರ 2012, ದಿನಾಂಕ. 23-07-2012ರ ಅಭಿಪ್ರಾಯದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

21/8/2012

(ಎನ್.ವೈ.ಸಾಗರ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರಿಕೆ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು;

ಪ್ರತಿ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.
3. ಸಹಾಯಕ ಪ್ರಾರೂಪಕಾರ ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
5. ಮಾನ್ಯ ಉಪ ಮುಖ್ಯ ಮಂತ್ರಿಗಳ ( ಕಂದಾಯ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ) ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
6. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)/ ಉಪ ಕಾರ್ಯದರ್ಶಿ ಇವರುಗಳ ಅಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
7. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
8. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.